1) ಗುಲ್ಬರ್ಗಾ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯಿಂದ ಎಷ್ಟು ದೇವಸ್ಥಾನಕ್ಕೆ ಹಣ ಮಂಜೂರು ಮಾಡಲಾಗಿದೆ (ಕಳೆದ ಮೂರು ವರ್ಷಗಳ ವಿವರವನ್ನು ನೀಡುವುದು) ಕ್ಷೇತ್ರವಾರು ಮಾಹಿತಿ ನೀಡುವುದು?

ಶ್ರೀ ಬಾಬುರಾವ್ ಬಸವಣಪ್ಪ ಚಿಂಚನೂರು (ಮುಜರಾಯಿ ರಾಜ್ಯ ಸಚಿವರು)

1) ಗುಲ್ಬರ್ಗಾ ಜಿಲ್ಲೆಗೆ ಕಳೆದ 3 ವರ್ಷಗಳಲ್ಲಿ ಸರ್ಕಾರವು ಬಿಡುಗಡೆ ಮಾಡಿದ ಅನುದಾನದ ವಿವರ ಕೆಳಕಂಡಂತಿದೆ.

ನಿರ್ಮಾಣ		
1997-98	-	-
1998-99	ರೂ. 28.25 ಲಕ್ಷ	19 ಸಂಸ್ಥೆಗಳು
1999-2000	ರೂ. 7.95 ಲಕ್ಷ	22 ಸಂಸ್ಥೆಗಳು
ಜೀರ್ಣೋದ್ಧಾರ		
1997-98	ರೂ. 25.05 ಲಕ್ಷ	123 ಸಂಸ್ಥೆಗಳು
1998-99	ರೂ. -	-
1999-2000	ರೂ. 20.05 ಲಕ್ಷ	14 ಸಂಸ್ಥೆಗಳು

ದೇವಾಲಯದ ದುರಸ್ಥಿ:ಜೀರ್ಣೋದ್ಧಾರ ಮತ್ತು ನಿರ್ಮಾಣಕ್ಕಾಗಿ ಬಂದ ಮನವಿಗಳನ್ನು ಹಣದ ಲಭ್ಯತೆ ಆಧಾರದ ಮೇಲೆ ಪರಿಶೀಲಿಸಿ ಜಿಲ್ಲಾವಾರು ಹಣ ಬಿಡುಗಡೆ ಮಾಡಲಾಗುತ್ತದೆ. ಕ್ಷೇತ್ರವಾರು ಹಣ ಬಿಡುಗಡೆ ಮಾಡಲಾಗುವುದಿಲ್ಲ.

ಕಮಲಾಪುರ ಕ್ಷೇತ್ರದ ಸಣ್ಣ ನೀರಾವರಿ ಕೆರೆಗಳ ದುರಸ್ಥಿ:

102 (307) ಶ್ರೀ ರೇವು ನಾಯಕ್ ಬೆಳಮಗಿ (ಕಮಲಪುರ): ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಗುಲ್ಬರ್ಗಾ ಜಿಲ್ಲೆಯ ಕಮಲಾಪುರ ಕ್ಷೇತ್ರದಲ್ಲಿ ಇರುವ ಸಣ್ಣ ನೀರಾವರಿ ಕೆರೆಗಳ ಸಂಖ್ಯೆ ಎಷ್ಟು;

2) ಇದರಲ್ಲಿ ಬಹಳಷ್ಟು ಕೆರೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ದುರಸ್ತಿಗೆ ಪ್ರಸ್ತಾವನೆ ಸರ್ಕಾರಕ್ಕೆ ಬಂದಿದೆಯೇ;

3) ಓಕಳಿ ಕೆರೆ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ; ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು)

1) ಕೆರೆಗಳ ಸಂಖ್ಯೆ 16.

2) ಹೌದು. ಪ್ರಸ್ತುತ 2000-01ನೇ ಸಾಲಿನಲ್ಲಿ ಕೆರೆಗಳ ಆಧುನೀಕರಣ ಅಡಿಯಲ್ಲಿ 2 ಕೆರೆಗಳ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಬಾಕಿ ಉಳಿದ ಕೆರೆಗಳ ಕಾಲುವೆ ದುರಸ್ತಿ ಕೆಲಸ ಮಾಷ್ಕಿಕ ನಿರ್ವಹಣೆ ಅನುದಾನದಲ್ಲಿ ಹಂತ ಹಂತವಾಗಿ ಕೈಗೆತ್ತಿಕೊಳ್ಳಲು ಯೋಚಿಸಲಾಗಿದೆ.

3) ಒಕಳಿ ಕೆರೆ ನಿರ್ಮಾಣದ ಅಂದಾಜು ಪಟ್ಟಿ ತಯಾರಿಸಿ ಮೌಲ್ಯ ನಿರ್ಣಯ ಸಮಿತಿಯಿಂದ ಒಪ್ಪಿಗೆ ಪಡೆಯಲು ಮಂಡಿಸಲಾಗಿರುತ್ತದೆ. ಈ ಕಾಮಗಾರಿಯ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ತಾಂತ್ರಿಕ ಮಂಜೂರಾತಿ ಪಡೆದು, 3 ವರ್ಷಗಳಲ್ಲಿ ಪೂರ್ಣಗೊಳಿಸಬಹುದಾಗಿದೆ.

ರಾಜ್ಯದ ಹಿರಿಯ ಅಧಿಕಾರಿಗಳು ಒಂದಕ್ಕಿಂತ ಹೆಚ್ಚು ನಿವೇಶನಗಳನ್ನು ಹೊಂದಿರುವುದು:

104 (192) ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ರಾಜ್ಯದಲ್ಲಿ ಐ.ಎ.ಎಸ್, ಐ.ಪಿ.ಎಸ್, ಐ.ಎಫ್.ಎಸ್, ಕೆ.ಎ.ಎಸ್. ಮತ್ತು ರಾಜ್ಯ ಹಿರಿಯ ಅಧಿಕಾರಿಗಳು ಒಂದಕ್ಕಿಂತ ಹೆಚ್ಚು ನಿವೇಶನಗಳನ್ನು ಹೊಂದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಹಾಗಿದ್ದಲ್ಲಿ ಅಂತಹ ಅಧಿಕಾರಿಗಳು ಯಾರ್ಯಾರು;

3) ಇಂತಹ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

4) ಇಲ್ಲಿಯವರೆಗೆ ಯಾವ ಯಾವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ, ಏನು ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು)

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿ)

1) ಬಂದಿದೆ.

2) ಸರ್ಕಾರದಲ್ಲಿ ಲಭ್ಯವಿರುವ ಮಾಹಿತಿಯಂತೆ ಉತ್ತರವನ್ನು ಅನುಬಂಧ ಒಂದರಲ್ಲಿ ನೀಡಲಾಗಿದೆ.

3) ಸರ್ಕಾರವು ಸುತ್ತೋಲೆ ಸಂಖ್ಯೆ: ಸಿಆಸುಇ 261 ಎಸ್‌ಎಂಕೃ 99 ದಿನಾಂಕ: 5-11-99ರಲ್ಲಿ ಅಧಿಕಾರಿಗಳು ಸರ್ಕಾರಿ ಏಜನ್ಸಿಗಳು ಅಂದರೆ, ನಗರ ಅಭಿವೃದ್ಧಿ ಪ್ರಾಧಿಕಾರ, ಗೃಹ ನಿರ್ಮಾಣ ಸಹಕಾರ ಸಂಘ, ಕರ್ನಾಟಕ ಗೃಹ ಮಂಡಳಿ, ಇತ್ಯಾದಿಗಳ ಮೂಲಕ ಒಂದಕ್ಕಿಂತ ಹೆಚ್ಚು ನಿವೇಶನ ಪಡೆಯದಿರುವಂತೆ ಸೂಚಿಸಿದೆ.

4) ಇಲ್ಲಿಯವರೆವಿಗೂ ದಿನಾಂಕ: 5-11-99ರ ಸುತ್ತೋಲೆಯಂತೆ, ಸರ್ಕಾರಿ ಏಜನ್ಸಿಗಳಿಂದ ಒಂದಕ್ಕಿಂತ ಹೆಚ್ಚಿನ ನಿವೇಶನ ಪಡೆಯಲು ಅರ್ಹರಲ್ಲವೆಂದು ಗುರುತಿಸಲ್ಪಟ್ಟ ಅಧಿಕಾರಿಗಳಿಗೆ, ಒಂದು ನಿವೇಶನವನ್ನು ಸಂಬಂಧಿಸಿದ ಪ್ರಾಧಿಕಾರಗಳಿಗೆ ಹಿಂತಿರುಗಿಸಲು ಸೂಚಿಸಲಾಗಿದೆ. ಈ ಅಧಿಕಾರಿಗಳ ಹೆಸರುಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ.